For More Job News: www.kpscvaani.com

# ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ: ಇ(1) /2020-21/ಪಿಎಸ್‌ಸಿ

ಲೋಕ ಸೇವಾ ಆಯೋಗದ ಕಛೇರಿ,
"ಉದ್ಯೋಗ ಸೌಧ",
ಬೆಂಗಳೂರು, ದಿನಾಂಕ: 11-08-2020.

## ::ಪತ್ರಿಕಾ ಪ್ರಕಟಣೆ::

ಕರ್ನಾಟಕ ಲೋಕಸೇವಾ ಆಯೋಗವು ಈ ಕೆಳಕಂಡ ದಿನಾಂಕಗಳಂದು ಪರೀಕ್ಷೆಗಳನ್ನು ನಡೆಸುತ್ತಿದೆ.

| ಕ್ರಮ ಸಂಖ್ಯೆ | ಹುದ್ದೆಯ ಹೆಸರು | ಪರೀಕ್ಷಾ ದಿನಾಂಕ |
|---|---|---|
| 1 | 2020ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆ | 18-08-2020 ರಿಂದ 16-09-2020 ರವರೆಗೆ |
| 2 | ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ನಿಯಂತ್ರಕರು 54 ಹುದ್ದೆಗಳು | 17-08-2020 |
| 3 | ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 106 ಹುದ್ದೆಗಳು | 24-08-2020 |

ದಿನಾಂಕ:17-08-2020ರ ಸೋಮವಾರದಂದು ನಡೆಸಲಿರುವ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಸಹಾಯಕ ನಿಯಂತ್ರಕರು ಗ್ರೂಪ್ 'ಎ' ವೃಂದದ ಒಟ್ಟು 54 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ ಹಾಗೂ ಆಯೋಗದ ವಿಭಾಗೀಯ ಕೇಂದ್ರಗಳಾದ ಮೈಸೂರು, ಬೆಳಗಾವಿ, ಕಲಬುರಗಿ ಮತ್ತು ಶಿವಮೊಗ್ಗ ಇಲ್ಲಿ ನಡೆಸುತ್ತಿದ್ದು, ಒಟ್ಟು 9,918 ಅಭ್ಯರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಿರುತ್ತಾರೆ. ದಿನಾಂಕ: 10-08-2020ರಿಂದ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಿಕೊಡಲಾಗಿದೆ.

ದಿನಾಂಕ:24-08-2020ರ ಸೋಮವಾರದಂದು ನಡೆಸಲಿರುವ ಗೆಜೆಟೆಡ್ ಪ್ರೊಬೇಷನರ್ 106 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ, ಬೆಳಗಾವಿ, ಬಳ್ಳಾರಿ, ದಾವಣಗೆರೆ, ಧಾರವಾಡ/ಹುಬ್ಬಳ್ಳಿ, ಕಲಬುರಗಿ, ಮಂಗಳೂರು, ಮೈಸೂರು ರಾಯಚೂರು ಮತ್ತು ಶಿವಮೊಗ್ಗ ಇಲ್ಲಿ ನಡೆಸುತ್ತಿದ್ದು, ಸದರಿ ಪರೀಕ್ಷೆಗೆ ಒಟ್ಟು **1,65,258** ಅಭ್ಯರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಿರುತ್ತಾರೆ. ಪರೀಕ್ಷೆಯ ಪೂರ್ವ ಸಿದ್ಧತಾ ಕಾರ್ಯ ಪ್ರಗತಿಯಲ್ಲಿರುತ್ತದೆ.

-2-

For More Job News: www.kpscvaani.com



**ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುತ್ತಿರುವುದರಿಂದ ಆಯೋಗದಿಂದ ಪರೀಕ್ಷಾ ಉಪಕೇಂದ್ರಗಳಲ್ಲಿ ಈ ಕೆಳಕಂಡ ಮುಂಜಾಗ್ರತ ಕ್ರಮವನ್ನು ಕೈಗೊಳ್ಳಲಾಗುವುದು.**

- ಪರೀಕ್ಷಾ ಉಪಕೇಂದ್ರ / ಆವರಣ, ಪರೀಕ್ಷಾ ಕೊಠಡಿಗಳು, ಶೌಚಾಲಯಗಳನ್ನು ಪರೀಕ್ಷಾ ಹಿಂದಿನ ದಿನ ಸ್ಯಾನಿಟೈಜ್ ಮಾಡಲು ಕ್ರಮಕೈಗೊಳ್ಳಲಾಗುವುದು.
- ಪರೀಕ್ಷಾ ಕೇಂದ್ರದ ಮುಖ್ಯದ್ವಾರದಲ್ಲಿ ಅಭ್ಯರ್ಥಿಗಳಿಗೆ ಹ್ಯಾಂಡ್ ಸ್ಯಾನಿಟೈಸ್ ಮಾಡಿಸುವ ವ್ಯವಸ್ಥೆ ಮತ್ತು ಥರ್ಮಲ್ ಸ್ಕ್ರೀನಿಂಗ್ ಮಾಡಿಸಿ, ಒಳಬಿಡುವ ವ್ಯವಸ್ಥೆಯನ್ನು ಮಾಡಲಾಗುವುದು.
- ಅಭ್ಯರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಆಗಮಿಸುವಾಗ ಹಾಗೂ ಅವರಿಗೆ ಹಂಚಿಕೆಯಾಗಿರುವ ಕೊಠಡಿಗೆ ತೆರಳುತ್ತಿರುವಾಗ ಸಾಮಾನ್ಯ ಸಾಮಾಜಿಕ ಅಂತರ ಕಾಯ್ದುಕೊಳ್ಳುತ್ತಿರುವ ಬಗ್ಗೆ ಆರಕ್ಷಕರು/ಪರೀಕ್ಷಾ ಸಿಬ್ಬಂದಿಗಳು ವೀಕ್ಷಣೆಯ ಮೂಲಕ ಖಚಿತಪಡಿಸಿಕೊಳ್ಳುವ ವ್ಯವಸ್ಥೆ ಮಾಡಲಾಗುವುದು.
- ಪರೀಕ್ಷಾ ಕೇಂದ್ರಕ್ಕೆ ಹಾಜರಾಗಿರುವ ಅಭ್ಯರ್ಥಿಗಳಲ್ಲಿ ಕೆಮ್ಮು, ನೆಗಡಿ, ಶೀತ, ಜ್ವರ ಹಾಗೂ ಉಸಿರಾಟದ ತೊಂದರೆಯಂತಹ ರೋಗ ಲಕ್ಷಣಗಳು ಕಂಡುಬಂದಲ್ಲಿ ಅವರನ್ನು ಪ್ರತ್ಯೇಕ ಕೊಠಡಿಯಲ್ಲಿ ಆಸನ ವ್ಯವಸ್ಥೆಯನ್ನು ಮಾಡಲು ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಒಂದು ಹೆಚ್ಚುವರಿ ಕೊಠಡಿಯನ್ನು ಕಾಯ್ದಿರಿಸಲಾಗಿರುತ್ತದೆ.
- ಅಭ್ಯರ್ಥಿಗಳು ಹಾಗೂ ಪರೀಕ್ಷೆಗಳಿಗೆ ನಿಯೋಜಿತರಾಗುವ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ಮುಖಗವಸು / ಮುಖಹೊದಿಕೆ ಧರಿಸುವುದು ಕಡ್ಡಾಯವಾಗಿರುತ್ತದೆ.
- ಅಭ್ಯರ್ಥಿಗಳಿಗೆ ಈಗಾಗಲೇ ಪ್ರವೇಶ ಪತ್ರದಲ್ಲಿ ಕಡ್ಡಾಯವಾಗಿ ಮಾಸ್ಕ್ ಧರಿಸಿ ಹಾಜರಾಗಲು ಹಾಗೂ ಸಣ್ಣ ಪ್ರಮಾಣದ ಪಾರದರ್ಶಕವಿರುವ ಸ್ಯಾನಿಟೈಸರ್ ಬಾಟಲನ್ನು(Small Size Transparant Bottles) ಪರೀಕ್ಷಾ ಕೊಠಡಿಗೆ ತರಲು ಅನುಮತಿಸಲಾಗಿರುತ್ತದೆ.
- ಪರೀಕ್ಷಾ ಕೊಠಡಿಯಲ್ಲಿನ ಆಸನ ವ್ಯವಸ್ಥೆಯು ಪ್ರತಿಯೊಬ್ಬ ಅಭ್ಯರ್ಥಿಗೆ ಅಂದಾಜು 2 sq. mt. ಸುತ್ತಳತೆ ಅಂತರ ಕಾಯ್ದುಕೊಳ್ಳುವಂತೆ ಆಸನ ವ್ಯವಸ್ಥೆ ಮಾಡಲಾಗುತ್ತದೆ.

ಆಯೋಗವು ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಪರೀಕ್ಷೆಗಳನ್ನು ಅತ್ಯಂತ ಜಾಗರೂಕತೆಯಿಂದ ನಡೆಸಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆಗಳನ್ನು ನೀಡಲಾಗಿದೆ. ಮೇಲ್ಕಂಡಂತೆ ಎಲ್ಲಾ ಮುಂಜಾಗ್ರತ ಕ್ರಮವನ್ನು ವಹಿಸಲಾಗಿರುವುದರಿಂದ, ಅಭ್ಯರ್ಥಿಗಳು ಯಾವುದೇ ಆತಂಕವಿಲ್ಲದ ಯಾವುದೇ ಮಧ್ಯವರ್ತಿಗಳು ಅಥವಾ ಅನ್ಯವ್ಯಕ್ತಿಗಳು ತೋರುವ ಆಮಿಷಕ್ಕೆ ಬಲಿಯಾಗದೆ, ಊಹಾಪೋಹಗಳಿಗೆ ಮೊರೆ ಹೋಗದೆ ನ್ಯಾಯಸಮ್ಮತವಾಗಿ ಪರೀಕ್ಷೆಗಳನ್ನು ಬರೆಯಬೇಕೆಂದು ಪರೀಕ್ಷೆಯನ್ನು ಬರೆಯುವ ಎಲ್ಲಾ ಅಭ್ಯರ್ಥಿಗಳಿಗೆ ಆಯೋಗವು ಮನವಿ ಮಾಡಿಕೊಳ್ಳುತ್ತದೆ.

Sd/-
11-8-2020
ಕಾರ್ಯದರ್ಶಿ,
ಕರ್ನಾಟಕ ಲೋಕ ಸೇವಾ ಆಯೋಗ